**ದಿನಾಂಕ: 06-08-2022 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 165 ಗಣೇಶ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಮೋಹಿತ್. ಆರ್ – ಸಹಾಯಕ ಅಭಿಯಂತರರು (ವಾರ್ಡ್ 165 ಗಣೇಶ ಮಂದಿರ) (ಕಿಯೋನಿಕ್ಸ್)
2. ಶ್ರೀ. ಪವನ್ – ಕಿರಿಯ ಆರೋಗ್ಯ ಪರಿವೀಕ್ಷಕರು

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 165 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ವ್ಯಾಪ್ತಿಯ 21ನೇ ಮುಖ್ಯರಸ್ತೆಯಲ್ಲಿರುವ ಬಿಡಿಎ ಕಾಂಪ್ಲೆಕ್ಸ್‌ನ ಫರ್ಸ್ಟ್ ಕಾಫಿ ಅಂಗಡಿ ಮುಂಭಾಗದಲ್ಲಿ ಅಂಗಡಿಯವರು ಪಾದಚಾರಿ ಮಾರ್ಗವನ್ನು ಆಕ್ರಮಿಸಿರುತ್ತಾರೆ. ಇದರಿಂದ ಪಾದಚಾರಿಗಳಿಗೆ ಓಡಾಡಲು ತೊಂದರೆಯಾಗುತ್ತಿರುವುದರಿಂದ ತೆರವುಗೊಳಿಸುವಂತೆ ಕೋರಿರುತ್ತಾರೆ. ಅದರಂತೆ ಸದರಿ ಅಂಗಡಿಯ ವಸ್ತುಗಳನ್ನು ತೆರವುಗೊಳಿಸಿ ಪಾದಾಚಾರಿ ಸುಗಮ ಓಡಾಟಕ್ಕೆ ಅನುವು ಮಾಡಿಕೊಡಲಾಗಿರುತ್ತದೆ ಎಂದು ಅಭಿಯಂತರರು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರಕಟಿಸಲಾಗಿರುವ ಮಾಜಿ ಪಾಲಿಕೆ ಸದಸ್ಯರ ಭಾವಚಿತ್ರವಿರುವ ಬ್ಯಾನರ್‌ಗಳನ್ನು ತೆರವುಗೊಳಿಸಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ರವರು ತಿಳಿಸಿದರು.

ವಾರ್ಡ್ ವ್ಯಾಪ್ತಿಯ 21ನೇ ಮುಖ್ಯರಸ್ತೆಯಲ್ಲಿರುವ ಬಿಡಿಎ ಕಾಂಪ್ಲೆಕ್ಸ್ ರವರು ಕಸವನ್ನು ರಸ್ತೆಗೆ ಸುರಿಯುತ್ತಿರುತ್ತಾರೆ ಎಂದು ದೂರು ಬಂದಿರುತ್ತದೆ. ಸದರಿ ಕಸವನ್ನು ಕಾಂಪ್ಲೆಕ್ಸ್ ರವರೇ ವಿಲೇವಾರಿ ಮಾಡುವಂತೆ ತಿಳಿಸಲಾಗಿರುತ್ತದೆ.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದಲ್ಲಿ ಇರುವ ರಸ್ತೆಗುಂಡಿಗಳನ್ನು ಮುಚ್ಚಿ ಸಾರ್ವಜನಿಕರ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ.

ವಾರ್ಡ್ ವ್ಯಾಪ್ತಿಯಲ್ಲಿ ತುಂಬಾ ಹಾಳಾಗಿರುವ ರಸ್ತೆಗಳಿಗೆ ಡಾಂಬರೀಕರಣ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ರವರು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ಮಳೆಯಿಂದಾಗಿ ಚರಂಡಿಗಳಿಗೆ ಮಣ್ಣು ತುಂಬಿರುವುದನ್ನು ಸ್ವಚ್ಛಗೊಳಿಸಿ ರಸ್ತೆಯಲ್ಲಿ ನೀರು ನಿಲ್ಲದೇ ಚರಂಡಿಯಲ್ಲಿ ಮಳೆನೀರು ಸರಾಗವಾಗಿ ಹರಿಯಲು ಅನುಕೂಲ ಮಾಡಲಾಗಿರುತ್ತದೆ.

ಮು.ತಿ.ನೋ

ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸದಸ್ಯರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ಮೋಹಿತ್, ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಾಯಕ ಅಭಿಯಂತರರು
(ಕಿಯೋನಿಕ್ಸ್)
ವಾರ್ಡ್ ಸಂಖ್ಯೆ 165
ಗಣೇಶ ಮಂದಿರ